ಶ್ರೀ ಎಂ. ಟಿ. ಕೃಷ್ಣಪ್ಪ: 2 ಕೋಟಿ 70 ಲಕ್ಷ ರೂಪಾಯಿ ಬಿಡುಗಡೆ ಮಾಡಿದ್ದೇವೆಂದು ಹೇಳಿದ್ದೀರಲ್ಲ, ಎಲ್ಲಿ ಮಾಡಿದ್ದೀರಿ, ಇದನ್ನು ಯಾವ ರೀತಿಯಲ್ಲಿ ಮಾಡಿದ್ದೀರೆಂದು ಹೇಳಿ.

ಅಧ್ಯಕ್ಷರು: ಅದನ್ನು ತನಿಖೆ ಮಾಡಿಸಿ.

ಶ್ರೀ ಟಿ. ಬಿ. ಜಯಚಂದ್ರ: ಅದರ ಬಗ್ಗೆ ತನಿಖೆಯನ್ನು ಮಾಡಿಸೋಣ ಬಿಡಿ.

ಶ್ರೀ ಎಂ. ಟಿ. ಕೃಷ್ಣಪ್ಪ: ಅಲ್ಲಿ ಕೊನೇ ಪಕ್ಷ ರಿಪೇರಿಯನ್ನಾದರೂ ಮಾಡಿಸಿ. ಜನ ಓಡಾಡುವುದಕ್ಕೆ ಆಗುವುದಿಲ್ಲ.

ಅಧ್ಯಕ್ಷರು: ಕೃಷ್ಣಪ್ಪನವರೆ, ಎಲ್ಲಾ ಕಡೆ ಅದೇ ರೀತಿಯಾಗಿದೆ. ನಮ್ಮಲ್ಲಿ ಕೂಡ ಅದೇ ರೀತಿಯಾಗಿದೆ.

ಶ್ರೀ ಎಂ. ಟಿ. ಕೃಷ್ಣಪ್ಪ: ಮಾನ್ಯ ಅಧ್ಯಕ್ಷರೆ, ಇವರೇ ಅಲ್ಲಿನ ಜಿಲ್ಲಾ ಮಂತ್ರಿಗಳು.

ಅಧ್ಯಕ್ಷರು: ಅದೇ ಆಂಧ್ರದವರು.

iii) ವಿಷಯ: ಗ್ರಾಮೀಣ ಪ್ರದೇಶದ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಿಗೆ ಕಡಿಮೆ ಸೀಟುಗಳನ್ನು ಹಂಚಿಕೆ ಮಾಡಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಬಗ್ಗೆ.

ಶ್ರೀ ಹೆಚ್. ಸಿ. ಬಾಲಕೃಷ್ಣ (ಮಾಗಡಿ): ಮಾನ್ಯ ಅಧ್ಯಕ್ಷರೆ ಗ್ರಾಮೀಣ ಪ್ರದೇಶದ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ ಬಿ.ಕಾಂ., ತರಗತಿಗಳ ಪ್ರವೇಶಕ್ಕಾಗಿ ವಿದ್ಯಾರ್ಥಿಗಳಿಂದ ಅತೀ ಹೆಚ್ಚಾಗಿ ಅರ್ಜಿಗಳು ಬಂದಿದ್ದು, ಕಾಲೇಜುಗಳಿಗೆ ಕಡಿಮೆ ಸೀಟುಗಳನ್ನು ಹಂಚಿಕೆ ಮಾಡಿರುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತುಂಬಾ ತೊಂದರೆಯಾಗಿರುವುದರಿಂದ, ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ವಿದ್ಯಾರ್ಥಿಗಳ ಬೇಡಿಕೆಗೆ ತಕ್ಕಂತೆ ಹೆಚ್ಚು ಸೀಟುಗಳನ್ನು ಮಂಜೂರು ಮಾಡಲು

ವಿಶ್ವವಿದ್ಯಾಲಯಗಳಿಗೆ ಸೂಚಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ಆರ್. ವಿ. ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ತಮ್ಮ ಅಪ್ಪಣೆಯನ್ನು ಪಡೆದು ಈ ಹೇಳಿಕೆಯನ್ನು ನೀಡಬಯಸುತ್ತೇನೆ.

ಶ್ರೀ ಆರ್. ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು): ಮಾನ್ಯ ಅಧ್ಯಕ್ಷರೆ, ಗ್ರಾಮೀಣ ಪ್ರದೇಶದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬಿ.ಕಾಂ., ತರಗತಿಗಳ ಪ್ರವೇಶಕ್ಕಾಗಿ ವಿದ್ಯಾರ್ಥಿಗಳಿಂದ ಅತೀ ಹೆಚ್ಚಾಗಿ ಅರ್ಜಿಗಳು ಬಂದಿದ್ದು, ಕಾಲೇಜುಗಳಿಗೆ ಕಡಿಮೆ ಸೀಟುಗಳನ್ನು ಹಂಚಿಕೆ ಮಾಡಿರುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತುಂಬಾ ತೊಂದರೆಯಾಗಿರುವುದರಿಂದ, ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ವಿದ್ಯಾರ್ಥಿಗಳ ಬೇಡಿಕೆಗೆ ತಕ್ಕಂತೆ ಹೆಚ್ಚು ಸೀಟುಗಳನ್ನು ಮಂಜೂರು ಮಾಡಲು ವಿಶ್ವವಿದ್ಯಾಲಯಗಳಿಗೆ ಸೂಚಿಸುವ ಬಗ್ಗೆ ಕೇಳಿದ್ದಾರೆ.

ಗ್ರಾಮೀಣ ಪ್ರದೇಶದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬಿ.ಕಾಂ., ತರಗತಿಗಳ ಪ್ರವೇಶಕ್ಕಾಗಿ 2013–14ನೇ ಶೈಕ್ಷಣಿಕ ಸಾಲಿನಲ್ಲಿ, 66 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಹೆಚ್ಚುವರಿ ವಿಭಾಗಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಲಾಗಿದೆ. ಅದರಂತೆ, 2014–15ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬಿ.ಕಾಂ., ತರಗತಿಯಲ್ಲಿ ವಿದ್ಯಾರ್ಥಿಗಳ ಬೇಡಿಕೆಗೆ ತಕ್ಕಂತೆ 47 ಹೆಚ್ಚುವರಿ ವಿಭಾಗಗಳನ್ನು ಪ್ರಾರಂಭಿಸಲು ಈಗಾಗಲೇ ಅನುಮತಿ ನೀಡಲಾಗಿದೆ. ಇನ್ನೂ ಕೆಲವು ಕಾಲೇಜುಗಳಿಂದ ಪ್ರಸ್ತಾವನೆಗಳು ಸ್ವೀಕೃತಗೊಂಡಿದ್ದು, ಸದರಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಬೇಡಿಕೆಗೆ ತಕ್ಕಂತೆ ಬಿ.ಕಾಂ., ತರಗತಿಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಪ್ರಾರಂಭಿಸಲು ಅನುಮತಿ ನೀಡಲು ಕ್ರಮ ಕೈಗೊಳ್ಳಲಾಗುವುದು.

ಶ್ರೀ ಹೆಚ್. ಸಿ. ಬಾಲಕೃಷ್ಣ: ಮಾನ್ಯ ಅಧ್ಯಕ್ಷರೆ, ಈಗ ಪ್ರಥಮ ದರ್ಜೆ ಕಾಲೇಜಿನಲ್ಲಿ admission ನಡೆಯುತ್ತಿದೆ. ಈಗ ಬಿ. ಕಾಂ., ಗೆ ತುಂಬಾ demand ಇದೆ. ದಯಮಾಡಿ ಸರ್ಕಾರಿ ಕಾಲೇಜುಗಳಲ್ಲಿ ಹೆಚ್ಚುವರಿ ಸೆಕ್ಷನ್ ಗಳನ್ನು ಪ್ರಾರಂಭ ಮಾಡುವುದಕ್ಕೆ ತಾವು ಅನುಮತಿಯನ್ನು ನೀಡಿ, ತಾವು ಒಂದು ಆದೇಶ ಮಾಡಬೇಕೆಂದು ತಮ್ಮಲ್ಲಿ ಮನವಿ ಮಾಡುತ್ತೇನೆ.

ಶ್ರೀ ಆರ್. ವಿ. ದೇಶಪಾಂಡೆ: ನಾನು ತಮಗೆ ಉತ್ತರವನ್ನು ಕೊಟ್ಟಿದ್ದೇನೆ. ತಾವು ಹೇಳಿದ ಹಾಗೆ ಬಿ.ಕಾಂ.,ಗೆ ಸಾಕಷ್ಟು ಬೇಡಿಕೆ ಬಂದಿರುವುದು ನಿಜ. 2013–14ನೇ ಸಾಲಿನಲ್ಲಿ 66 ಕಡೆ permission ಕೊಟ್ಟು ಹೊಸ ಸೆಕ್ಷನ್ ಪ್ರಾರಂಭ ಮಾಡಲಾಗಿದೆ. ಈ ವರ್ಷ 2014–15ನೇ ಸಾಲಿನಲ್ಲಿ ಕಾಮರ್ಸ ನ 47 ಹೆಚ್ಚುವರಿ ಸೆಕ್ಷನ್ ಪ್ರಾರಂಭ ಮಾಡಿದ್ದೇವೆ. ಎಲ್ಲೆಲ್ಲಿ ಬೇಡಿಕೆಗಳು ಬರುತ್ತಿವೆ, ಅಲ್ಲಿ ಅನುಮತಿ ಕೊಟ್ಟಿದ್ದೇನೆ. ನಾನು ಅಧಿಕಾರ decentralize ಮಾಡಿದ್ದೇನೆ. ಅಲ್ಲಿನ ಕಮಿಷನರ್‌ಗೆ ನೀವು permission ಕೊಟ್ಟು, ನಂತರ ನಮಗೆ ಫೈಲ್ ಕಳುಹಿಸಿ ಎಂದು ಹೇಳಿದ್ದೇನೆ. ಆದ್ದರಿಂದ ಮಾಗಡಿ ಅಥವಾ ಎಲ್ಲೆಲ್ಲಿ demand ಇದೆಯೆಂದು ಹೇಳಿ, ನಾಳೆಯೇ ಮಾಡಿಕೊಡುತ್ತೇವೆ.

iv) ವಿಷಯ: ಹಾಸನ ಜಿಲ್ಲೆ ಹೊಳೆನರಸೀಪುರ ಪಟ್ಟಣದಲ್ಲಿ ನಬಾರ್ಡ ಯೋಜನೆಯಡಿ ಹೆರಿಗೆ ಮತ್ತು ಆಸ್ಪತ್ರೆ ಮಂಜೂರಾಗಿದ್ದು ಇನ್ನೂ ಕಟ್ಟಡ ನಿರ್ಮಾಣ ಕಾಮಗಾರಿಯು ಪ್ರಾರಂಭವಾಗದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ.

ಶ್ರೀ ಹೆಚ್. ಡಿ. ರೇವಣ್ಣ (ಹೊಳೆನರಸೀಪುರ): ಮಾನ್ಯ ಅಧ್ಯಕ್ಷರೆ, ಹಾಸನ ಜಿಲ್ಲೆ ಹೊಳೆನರಸೀಪುರ ಪಟ್ಟಣದಲ್ಲಿ ನಬಾರ್ಡ ಯೋಜನೆಯಡಿ ಹೆರಿಗೆ ಮತ್ತು ಆಸ್ಪತ್ರೆ ಮಂಜೂರಾಗಿದ್ದು ಇನ್ನೂ ಕಟ್ಟದ ನಿರ್ಮಾಣ ಕಾಮಗಾರಿಯು ಪ್ರಾರಂಭವಾಗದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನವನ್ನು ಸೆಳೆಯುತ್ತೇನೆ.